# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಸದಸ್ಯರ ಹೆಸರು | : | ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ | : | 858 (1106) |
| ಉತ್ತರಿಸಬೇಕಾದ ದಿನಾಂಕ | : | 23.02.2024 |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕೇಂದ್ರ ಪುರಸ್ಕೃತ ಜೆಜೆಎಂ ಯೋಜನೆಗೆ ಕೇಂದ್ರ ಸರ್ಕಾರದ ಪಾಲೆಷ್ಟು: ರಾಜ್ಯ ಸರ್ಕಾರದ ಪಾಲೆಷ್ಟು; (ವಿವರ ನೀಡುವುದು)</td><td>ಜಲ್ ಜೀವನ್ ಮಿಷನ್ ಯೋಜನೆಯ ಅನುದಾನದ ಹಂಚಿಕೆ ಅನುಪಾತ ಈ ಕೆಳಗಿನಂತಿರುತ್ತವೆ;
<table>
<tr><th>ಕಾಮಗಾರಿಯ ಮಾದರಿ</th><th>ಕೇಂದ್ರದ ಪಾಲು</th><th>ರಾಜ್ಯದ ಪಾಲು</th><th>ಸಮುದಾಯ ವಂತಿಕೆ</th><th>ಒಟ್ಟು</th></tr>
<tr><td>ನಳ ಸಂಪರ್ಕ ಒದಗಿಸುವ ಕಾಮಗಾರಿ</td><td>45%</td><td>45%</td><td>10%</td><td>100%</td></tr>
<tr><td>ಬಹುಗ್ರಾಮ ಕುಡಿಯುವ ನೀರಿನ ಯೋಜನೆ</td><td>50%</td><td>50%</td><td>-</td><td>100%</td></tr>
</table></td></tr>
<tr><td>ಆ)</td><td>ಹೆಚ್ಚಿನ ಅನುದಾನ ರಾಜ್ಯ ಸರ್ಕಾರ ಭರಿಸುತ್ತಿದ್ದರೆ ಈ ಯೋಜನೆಗೆ ಸರ್ಕಾರ ಒಂದು ಯೋಜನೆಯ ಹೆಸರು ಕೊಡಬಹುದಲ್ಲವೇ; ಹಾಗಿದ್ದಲ್ಲಿ, ಈ ಯೋಜನೆಯ ಹೆಸರು ಬದಲಿಸುವ ಯೋಜನೆ ಏನಾದರೂ ಸರ್ಕಾರಕ್ಕಿದೆಯೇ;</td><td>ಜಲ್ ಜೀವನ್ ಮಿಷನ್ ಯೋಜನೆಯಡಿ ಕೈಗೆತ್ತಿಕೊಳ್ಳಲಾಗಿರುವ ಕಾಮಗಾರಿಗಳ ಕಾರ್ಯಾಚರಣೆ ಮತ್ತು ನಿರ್ವಹಣೆಯ ವೆಚ್ಚವನ್ನು ಮಾರ್ಗಸೂಚಿಯನ್ವಯ ಸಂಬಂಧಪಟ್ಟ ರಾಜ್ಯ ಸರ್ಕಾರವು ಭರಿಸಬೇಕಾಗಿರುತ್ತದೆ.<br>ಸದರಿ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿರುವುದರಿಂದ ಮಾರ್ಗಸೂಚಿಯನ್ವಯ ಜಲ ಜೀವನ್ ಮಿಷನ್ ಯೋಜನೆಯ ಹೆಸರಿನಲ್ಲಿ ರಾಜ್ಯದಲ್ಲಿ ಕೈಗೆತ್ತಿಕೊಳ್ಳಲಾಗುತ್ತಿದೆ.</td></tr>
<tr><td>ಇ)</td><td>ಈ ಯೋಜನೆಯಡಿಯಲ್ಲಿ ಅನೇಕ ಜಿಲ್ಲೆಗಳಲ್ಲಿ ಕಳಪೆ ಮಟ್ಟದ ಕಾಮಗಾರಿಗಳು ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಅಂತವರ ಮೇಲೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗಿದೆ? (ವಿವರ ನೀಡುವುದು)</td><td>ಸರ್ಕಾರಕ್ಕೆ ಗಮನದಲ್ಲಿ ಇದೆ.<br>ಜಲ್ ಜೀವನ್ ಮಿಷನ್ ಯೋಜನೆಯನ್ನು ಜಿಲ್ಲಾ ಹಂತದಲ್ಲಿ ಅನುಷ್ಠಾನಗೊಳಿಸಲಾಗುತ್ತಿದ್ದು, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ರವರು ಯೋಜನೆಯ ಮೇಲುಸ್ತುವಾರಿಯನ್ನು ವಹಿಸಿರುತ್ತಾರೆ. ಕಾಮಗಾರಿಯ ಗುಣಮಟ್ಟವನ್ನು ಪರಿಶೀಲಿಸಲು ಜಿಲ್ಲಾ ಮಟ್ಟದಲ್ಲಿ 3ನೇ ವ್ಯಕ್ತಿ ತಪಾಸಣೆ (TPIA) ಸಂಸ್ಥೆಯನ್ನು ನಿಯೋಜಿಸಲಾಗಿದ್ದು, ರಾಜ್ಯಮಟ್ಟದಲ್ಲಿ ರಾಜ್ಯ ಗುಣಮಟ್ಟ ಸಮಾಲೋಚಕರು (SQM) ರವರನ್ನು ಹಾಗೂ ಕೇಂದ್ರ ಮಟ್ಟದಲ್ಲಿ National Wash Experts ಕಾಲಕಾಲಕ್ಕೆ ನಿಯೋಜಿಸಿ ಕಾಮಗಾರಿಗಳ ಗುಣಮಟ್ಟವನ್ನು ಖಾತರಿಪಡಿಸಿಕೊಳ್ಳಲಾಗುತ್ತಿದೆ.</td></tr>
</table>

| | | |
|---|---|---|
| | | ಅಲ್ಲದೇ, ಪ್ರಸ್ತುತ ರಾಜ್ಯಮಟ್ಟದಲ್ಲಿ ಒಟ್ಟಾರೆ ರಾಜ್ಯದ ಜೆಜೆಎಂ ಕಾಮಗಾರಿಗಳ ಗುಣಮಟ್ಟವನ್ನು ಪರೀಕ್ಷಿಸಲು 3ನೇ ವ್ಯಕ್ತಿ ತಪಾಸಣೆಯನ್ನು M/S Bureau Veritas ಸಂಸ್ಥೆಯವರಿಗೆ ವಹಿಸಲಾಗಿದ್ದು, ಈ ಸಂಸ್ಥೆಯು ಸಹ ಕಾಮಗಾರಿಗಳ ಗುಣಮಟ್ಟವನ್ನು ಪರೀಕ್ಷಿಸುತ್ತಿದ್ದು, ಮಾರ್ಗದರ್ಶಿನ/ಶಿಫಾರಸ್ಸಿನಂತೆ ಕ್ರಮಕೈಗೊಂಡು ಕಾಮಗಾರಿಗಳ ಗುಣಮಟ್ಟವನ್ನು ಖಾತರಿಪಡಿಸಿಕೊಳ್ಳಲಾಗುತ್ತಿದೆ. |

ಗ್ರಾಕುನೀ&ನೈಇ/ಮುಇಂ/ತಾಂತ್ರಿಕ/284/2023-24

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.